ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 24/06/20

# ಅನಧಿಕೃತ ಕಟ್ಟಡಗಳ ತೆರವಿಗೆ ಸಿದ್ಧತೆ

**ಬೆಂಗಳೂರು:** ಕೆರೆ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಾಣಗೊಂಡ ಮನೆಗಳನ್ನು ತೆರವುಗೊಳಿಸುವಂತೆ ಬಿಬಿಎಂಪಿ ಆಯುಕ್ತರು ಆದೇಶ ಹೊರಡಿಸಿದ್ದು, ಅನಧಿಕೃತ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದವರಿಗೆ ಮತ್ತೆ ಸಂಕಷ್ಟ ಎದುರಾಗಿದೆ.

2015ರಲ್ಲಿ ನಡೆಸಿದ ಸಮೀಕ್ಷೆ ಅನುಸಾರ ನಗರದ 200ಕ್ಕೂ ಕೆರೆಗಳ ಸ್ಥಳ, ಬಫರ್ ವಲಯ ಒತ್ತುವರಿ ಮಾಡಿಕೊಂಡು ಸಾವಿರಾರು ಮನೆ ನಿರ್ಮಿಸಿರುವ ಕುರಿತು ಹೈಕೋರ್ಟ್‌ಗೆ ಬಿಬಿಎಂಪಿ ಮಾಹಿತಿ ನೀಡಿತ್ತು. ಇದೀಗ ಎಲ್ಲ ಅನಧಿಕೃತ ಕಟ್ಟಡಗಳ ತೆರವಿಗೆ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ಅನಧಿಕೃತ ಕಟ್ಟಡ ತೆರವಿಗೆ ಕ್ರಮ ವಹಿಸುವಂತೆ ಬಿಬಿಎಂಪಿ ಆಯುಕ್ತರು ಸಂಬಂಧಿಸಿದ 8 ವಲಯಗಳ ಜಂಟಿ ಆಯುಕ್ತರಿಗೆ ಆದೇಶ ಹೊರಡಿಸಿದ್ದಾರೆ. ಜತೆಗೆ, ತೆರವು ಕಾರ್ಯಾಚರಣೆ ಕುರಿತಂತೆ ಪ್ರತಿ 7 ದಿನಕೊಮ್ಮೆ ವರದಿ ನೀಡುವಂತೆ ಸೂಚಿಸಿದ್ದಾರೆ.

**» ವಾರಕ್ಕೊಮ್ಮೆ ಕಾರ್ಯಾಚರಣೆ ಮಾಹಿತಿ ಕಡ್ಡಾಯ**

ಪ್ರಸ್ತುತ ಬಿಬಿಎಂಪಿ ವ್ಯಾಪ್ತಿಗೆ ಬರುವ ಕೆರೆಗಳ ಒತ್ತುವರಿ ಗುರುತಿಸಲಾಗಿದೆ. ಅನಧಿಕೃತವಾಗಿ ಮನೆ ನಿರ್ಮಿಸಿಕೊಂಡವರ ಮೇಲೆ ಕೆಎಂಸಿ ಕಾಯ್ದೆ-1976 ಪ್ರಕಾರ ಕ್ರಮ ಜರುಗಿಸುವ ಅಧಿಕಾರವನ್ನು ಕಿರಿಯ ಇಂಜಿನಿಯರ್, ಸಹಾಯಕ ಮತ್ತು ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗೆ ನೀಡಲಾಗಿದೆ. ಜತೆಗೆ ಕೆರೆ ಅಂಗಳ ಒತ್ತುವರಿಯನ್ನು ತೆರವು ಮಾಡುವ ಅಧಿಕಾರ ನೀಡಲಾಗಿದೆ. ಎಲ್ಲ ಅಧಿಕಾರಿಗಳು ವಾರಕ್ಕೊಮ್ಮೆ ವರದಿ ನೀಡದಿದ್ದಲ್ಲಿ ಕೆಎಂಸಿ ಕಾಯ್ದೆ ಪ್ರಕಾರ ಸಂಬಂಧಪಟ್ಟ ಅಭಿಯಂತರರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುತ್ತದೆ ಎಂದು ಆಯುಕ್ತರು ಎಚ್ಚರಿಕೆ ನೀಡಿದ್ದಾರೆ.